# ಅಧಿವೇಶನಕ್ಕೆ ಸಜ್ಜಾಗುವಂತೆ ಸಚಿವರಿಗೆ ಸಿಎಂ ಸೂಚನೆ

• ಎಲ್ಲ ಸಚಿವರು ತಮ್ಮ ಖಾತೆಗಳಿಗೆ ಸಂಬಂಧಪಟ್ಟಂತೆ ಮಾಹಿತಿ, ವಿವರಗಳನ್ನು ಪಡೆದುಕೊಂಡು ಅಧಿವೇಶನ ಎದುರಿಸಲು ಸನ್ನದ್ಧರಾಗಬೇಕು: ಬಿಎಸ್‌ವೈ

**ಬೆಂಗಳೂರು:** ವಿಧಾನಮಂಡಲದ ಮಳೆಗಾಲದ ಅಧಿವೇಶನದ ಹಿನ್ನೆಲೆಯಲ್ಲಿ ಸಂಪುಟ ಸಹೋದ್ಯೋಗಿಗಳೊಂದಿಗೆ ಸೋಮವಾರ ಸಭೆ ನಡೆಸಿದ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಅಗತ್ಯ ದಾಖಲೆ, ಅಂಕಿಸಂಖ್ಯೆ, ಮಾಹಿತಿಯೊಂದಿಗೆ ಸಜ್ಜಾಗುವಂತೆ ಸಲಹೆ ನೀಡಿದ್ದಾರೆ.

ಪ್ರತಿಪಕ್ಷಗಳ ಆರೋಪಗಳಿಗೆ ತಕ್ಕ ಪ್ರತ್ಯುತ್ತರ ನೀಡುವ ಜತೆಗೆ ಸರ್ಕಾರದ ಕಾರ್ಯವೈಖರಿ, ಆಡಳಿತವನ್ನು ಸಮರ್ಥಿಸಿಕೊಳ್ಳುವ ಅಧಿವೇಶನವನ್ನು ಎದುರಿಸಬೇಕು. ಎಲ್ಲ ಸಚಿವರು ತಮ್ಮ ಖಾತೆಗಳಿಗೆ ಸಂಬಂಧಪಟ್ಟಂತೆ ಮಾಹಿತಿ, ವಿವರಗಳನ್ನು ಪಡೆದುಕೊಂಡು ಅಧಿವೇಶನವನ್ನು ಎದುರಿಸಲು ಸನ್ನದ್ಧರಾಗಬೇಕು. ಗೊಂದಲಮಯ ಹೇಳಿಕೆ, ಅಭಿಪ್ರಾಯಗಳನ್ನು ನೀಡದೆ ಒಮ್ಮತದಿಂದ ಕಾರ್ಯಪ್ರವೃತ್ತರಾಗಬೇಕು. ಕೋವಿಡ್-19 ನಿಯಂತ್ರಣ, ನಿರ್ವಹಣೆ ಸೇರಿ ಮಾರ್ಚ್‌ನಿಂದೀಚೆಗಿನ ಬೆಳವಣಿಗೆಗಳನ್ನು ಸರ್ಕಾರ ಯಶಸ್ವಿಯಾಗಿ ನಿಭಾಯಿಸಿದ್ದು ಇದನ್ನು ಪರಿಣಾಮಕಾರಿಯಾಗಿ ಪ್ರತಿಪಾದಿಸುವಂತೆಯೂ ಯಡಿಯೂರಪ್ಪ ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಎರಡು ದಿನ ಜಿಲ್ಲೆಯಲ್ಲಿರಿ:** ವಾರದಲ್ಲಿ ಎರಡು ದಿನ ಉಸ್ತುವಾರಿ ಸಚಿವರು ಆಯಾ ಜಿಲ್ಲೆಗಳಲ್ಲಿದ್ದು ಅಭಿವೃದ್ಧಿ ಕಾರ್ಯಗಳತ್ತ ಗಮನ ಹರಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಪಕ್ಷದ ಜಿಲ್ಲಾ ಕಚೇರಿಯಲ್ಲಿ ವಾರದಲ್ಲಿ ಕನಿಷ್ಠ ಅರ್ಧ ದಿನ ಕಳೆದು ಕಾರ್ಯಕರ್ತರು, ಸಂಘ ಪರಿವಾರದವರ ಮನವಿ, ಕೆಲಸ ಕಾರ್ಯಗಳಿಗೆ ಸ್ಪಂದಿಸಬೇಕು. ಸಚಿವರು ಬೆಂಗಳೂರಿನಲ್ಲಿದ್ದಾಗಲೂ ಪಕ್ಷದ ರಾಜ್ಯ ಕಾರ್ಯಾಲಯಕ್ಕೆ ಭೇಟಿ ನೀಡಿ ಕಾರ್ಯಕರ್ತರ ಅಹವಾಲು ಆಲಿಸಬೇಕು ಎಂದು ಪರೋಕ್ಷವಾಗಿ ಅನ್ಯ ಪಕ್ಷಗಳಿಂದ ಬಂದು ಸಚಿವರಾದವರಿಗೆ ಯಡಿಯೂರಪ್ಪ ಕಿವಿಮಾತು ಹೇಳಿದರು ಎಂದು ಮೂಲಗಳು ತಿಳಿಸಿವೆ.

ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರಿಯಿರಿ: ಉಸ್ತುವಾರಿ ಸಚಿವರು ಜಿಲ್ಲೆಯ ಎಲ್ಲ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರಿಯುವುದು ಸೂಕ್ತ. ಯಾವುದೇ ಕೆಲಸ, ಕಾರ್ಯ, ಯೋಜನೆ, ಕಾಮಗಾರಿ, ವರ್ಗಾವಣೆಯಲ್ಲಿ ಒಮ್ಮತದ ನಿಲುವು ಕೈಗೊಂಡರೆ ಕಾರ್ಯ ಸುಗಮವಾಗಲಿದೆ. ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಏಕಪಕ್ಷೀಯ ನಿರ್ಧಾರ ಕೈಗೊಂಡರೆ ಅವರು ನಮ್ಮ ಬಳಿಗೆ ಬಂದು ಅಳಲು ತೋಡಿಕೊಳ್ಳುತ್ತಾರೆ. ಅಂತಹ ಪರಿಸ್ಥಿತಿ ನಿರ್ಮಾಣಕ್ಕೆ ಎಡೆ ಮಾಡಿಕೊಡಬಾರದು ಎಂದು ಯಡಿಯೂರಪ್ಪ ಸೂಚಿಸಿದರು ಎಂದು ಗೊತ್ತಾಗಿದೆ.

**ದೆಹಲಿ ಪ್ರವಾಸ:** ಸೆ. 14ರ ಹೊತ್ತಿಗೆ ಯಡಿಯೂರಪ್ಪ ಅವರು ದೆಹಲಿ ಪ್ರವಾಸ ಕೈಗೊಳ್ಳುವ ಸಾಧ್ಯತೆ ಇದೆ. ಈ ಕುರಿತು ಸಚಿವರ ಸಭೆಯಲ್ಲೂ ಚರ್ಚೆಯಾಗಿದೆ. ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ, ಆರ್ಥಿಕ ನೆರವು ಸೇರಿದಂತೆ ಇತರೆ ಕೆಲಸ ಕಾರ್ಯಗಳಿಗೆ ಆಯ್ದ ಕೇಂದ್ರ ಸಚಿವರನ್ನು ಭೇಟಿಯಾಗಿ ಹೆಚ್ಚಿನ ಸ್ಪಂದನೆಗೆ ನೆರವಾಗುವಂತೆಯೂ ಮನವಿ ಮಾಡುವ ಬಗ್ಗೆಯೂ ಚರ್ಚೆಯಾಯಿತು ಎನ್ನಲಾಗಿದೆ.



## ಸದ್ಯದಲ್ಲೇ ಕೋವಿಡ್ ಕುರಿತು ಸಭೆ

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಮತ್ತೆ ಕೋವಿಡ್-19 ಸೋಂಕಿತರ ಸಂಖ್ಯೆ, ಸಾವಿನ ಪ್ರಮಾಣ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸದ್ಯದಲ್ಲೇ ಉನ್ನತ ಮಟ್ಟದ ಸಭೆ ನಡೆಸಲು ಮುಂದಾಗಿದ್ದಾರೆ. ಈ ಬಗ್ಗೆ ಸಚಿವರ ಸಭೆಯಲ್ಲೂ ಪ್ರಸ್ತಾಪಿಸಿದ ಯಡಿಯೂರಪ್ಪ ಸೋಂಕು ನಿಯಂತ್ರಣ ಕಾರ್ಯ ಹಳಿ ತಪ್ಪದಂತೆ ಎಚ್ಚರ ವಹಿಸಬೇಕಿದ್ದು ಈ ಕುರಿತು ಸದ್ಯದಲ್ಲೇ ವಿಸ್ತೃತ ಸಭೆ ನಡೆಸುವುದಾಗಿ ತಿಳಿಸಿದ್ದಾರೆ.